107.28 ಕಿಮೀ ವರೆಗಿನ 8.00 ಕಿಮೀ ಉದ್ದದ ರಸ್ತೆಯು 5.5 ಮೀ ಅಗಲವಿರುತ್ತದೆ. ಕಿಮೀ 109.49 ರಿಂದ 137.05 ಕಿಮೀ ವರೆಗಿನ 27.56 ಕಿಮೀ ಉದ್ದ ರಸ್ತೆಯು 3.75 ಮೀ ಅಗಲವಿರುತ್ತದೆ. ಇದರಲ್ಲಿ 9.00 ಕಿಮೀ ಉದ್ದವು ಜಲ್ಲಿ ಮೇಲ್ಪ್ಯೆಯನ್ನು ಹೊಂದಿದ್ದು ಉಳಿದ ಭಾಗವು ಡಾಂಬರ್ ಮೇಲ್ಪ್ಯೆ ಹೊಂದಿರುತ್ತದೆ. ಡಾಂಬರ್ ಮೇಲ್ಪ್ಯೆಲಿನ ತಗ್ಗು ಗುಂಡಿಗಳನ್ನು ಮುಚ್ಚಿ ಸುಗಮ ವಾಹನ ಸಂಚಾರಕ್ಕೆ ರಸ್ತೆಯನ್ನು ಯೋಗ್ಯವನ್ನಾಗಿಡಲಾಗಿರುತ್ತದೆ. ಈ ರಸ್ತೆಯನ್ನು ದ್ವಿಪಥ ರಸ್ತೆಯನ್ನಾಗಿ ಪರಿವರ್ತಿಸಲು ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮುಖ್ಯ ಇಂಜಿನಿಯರ್‌ರವರಿಗೆ ಸೂಚಿಸಲಾಗಿದೆ. ಪ್ರಸ್ತಾವನೆಯು ಸ್ವೀಕೃತಿಯಾದ ನಂತರ ಅನುದಾನದ ಲಭ್ಯತೆಗನುಸಾರವಾಗಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ರಾಜ್ಯ ಹೆದ್ದಾರಿ 85 (ಬೆಂಗಳೂರು ಜಲಸೂರು ರಸ್ತೆ)" : ಈ ರಸ್ತೆಯ ಡಾಂಬರ್ ಮೇಲ್ಪ್ಯೆನ ಗುಂಡಿಗಳನ್ನು ಮುಚ್ಚಿ ಗುಂಡಿ ಮುಕ್ತ ರಸ್ತೆಗಳನ್ನಾಗಿರಿಸಿ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ. ಈ ರಸ್ತೆಯನ್ನು ದ್ವಿಪಥ ರಸ್ತೆಯನ್ನಾಗಿ ಪರಿವರ್ತಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಮುಖ್ಯ ಇಂಜಿನಿಯರ್‌ರವರಿಗೆ ಸೂಚಿಸಲಾಗಿದೆ. ಪ್ರಸ್ತಾವನೆಯು ಸ್ವೀಕೃತಿಯಾದ ನಂತರ ಅನುದಾನದ ಲಭ್ಯತೆಗನುಸಾರವಾಗಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ಆ) ಮೇಲ್ಕಂಡ ಮೂರು ರಾಜ್ಯ ಹೆದ್ದಾರಿ ರಸ್ತೆಗಳನ್ನು ಅಗಲೀಕರಣ ಮತ್ತು ದ್ವಿಪಥ ರಸ್ತೆಗಳಾಗಿ ಅಭಿವೃದ್ಧಿ ಪಡಿಸುವ ಸಲುವಾಗಿ ಸಂಬಂಧಪಟ್ಟ ಮುಖ್ಯ ಇಂಜಿನಿಯರ್‌ರವರಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ. ಪ್ರಸ್ತಾವನೆಯು ಸ್ವೀಕೃತಿಯಾದ ನಂತರ ಅನುದಾನದ ಲಭ್ಯತೆಗನುಸಾರವಾಗಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ಕಾಂಪೌಂಡ್ ಮತ್ತು ವಿದ್ಯುದ್ದೀಕರಣ ಕಾಮಗಾರಿ

548 (108) ಶ್ರೀ ರಾಮಸ್ವಾಮಿಗೌಡ ಬಿ.ಬಿ.(ಕುಣಿಗಲ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ಪಟ್ಟಣದಲ್ಲಿರುವ ಪ್ರಥಮ ದರ್ಜೆ ಕಾಲೇಜಿಗೆ ಕಾಂಪೌಂಡ್ ಮತ್ತು ವಿದ್ಯುದ್ದೀಕರಣ ಕಾಮಗಾರಿಗಳನ್ನು ಮಾಡಲು

ಲೋಕೋಪಯೋಗಿ ಇಲಾಖೆಗೆ ಪ್ರಸ್ತಾವನೆಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಈ ಕಾಮಗಾರಿಗಳಿಗೆ ಸರ್ಕಾರವು ಅನುದಾನ ಬಿಡುಗಡೆ ಮಾಡಲು ಕ್ರಮ ಜರುಗಿಸುವುದು; ಕ್ರಮ ಜರುಗಿಸಿದ್ದಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಕುಣಿಗಲ್ ಪಟ್ಟಣದಲ್ಲಿರುವ ಪ್ರಥಮ ದರ್ಜೆ ಕಾಲೇಜಿಗೆ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸಲು ಅನುದಾನ ಬಿಡುಗಡೆಗಾಗಿ ಉಪಯೋಗಿತ ಇಲಾಖೆಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದ್ದು, ಅವರಿಂದ ಅನುದಾನ ಬಿಡುಗಡೆಯಾದ ಕೂಡಲೇ ಕಾಮಗಾರಿಗಳನ್ನು ಕೈಗೊಳ್ಳ ಲಾಗುವುದು.

ಆ) ಅನುದಾನ ಬಿಡುಗಡೆಯಾದ ನಂತರ ನಿಯಮಾನುಸಾರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

ಇ) ಮೇಲ್ಕಂಡಂತೆ ಅನುದಾನದ ಬಿಡುಗಡೆಯ ಪ್ರಸ್ತಾವನೆ ಸಲ್ಲಿಸಿರುವುದರಿಂದ ಅನುದಾನ ಬಿಡುಗಡೆಯ ನಿರೀಕ್ಷೆಯಲ್ಲಿದೆ.

ರಸ್ತೆಗಳ ಅಭಿವೃದ್ಧಿ

549 (109) ಶ್ರೀ ರಾಮಸ್ವಾಮಿಗೌಡ ಬಿ.ಬಿ. (ಕುಣಿಗಲ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಣಿಗಲ್ ತಾಲ್ಲೂಕಿನ ವ್ಯಾಪ್ತಿಯಲ್ಲಿ ಲೋಕೋಪಯೋಗಿ ರಸ್ತೆಗಳ ಅಭಿವೃದ್ಧಿ, ಮೇಲ್ದರ್ಜೆಗೇರಿಸುವಿಕೆ, ಅಗಲೀಕರಣ, ನಿರ್ವಹಣೆ ಇತ್ಯಾದಿಗಾಗಿ ಪ್ರಸ್ತುತ ಸಾಲಿನಲ್ಲಿ ಸ್ಥಳೀಯ ಅಭಿಯಂತರರು ರೂ.20.00 ಕೋಟಿಗೂ ಹೆಚ್ಚು ಅನುದಾನಗಳ ಬೇಡಿಕೆಗೆ ಪ್ರಸ್ತಾವಗಳನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಕೋರಿರುವ ಅನುದಾನಗಳನ್ನು ಈ ಸಾಲಿನಲ್ಲಿಯೇ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?